ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರರಾದ ದಾಸನ ಅರ್ಜಿಯನ್ನು 1887ನೇ ಇಸವಿ ಜುಲೈ ತಿಂಗಳು ತಾರೀಖು 28ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಪಟ್ಟನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಜೂನ್ ತಿಂಗಳು 28ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ಸಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಎಸ್. ಹೇಮಾಜಿರಾವ್,
ಡಿಸ್ಟ್ರಿಕ್ಟ್ ಜಡ್ಜ್.

ನಂ. 4. ತಾರೀಖು 18ನೇ ಜೂನ್ 1887.

ಯಡತೊರೆ ಸಬ್ ರಿಜಿಸ್ಟ್ರಾರ್ ಆಫೀಸ್‌ನಲ್ಲಿ ಇದರ ಕೆಳಗೆ ನಮೂದಿಸಿರುವ ದಸ್ತಾವೇಜುಗಳನ್ನ ಕ್ರಯವಾದ ವಾರಸುದಾರರಾಗಲಿ ಅಥವಾ ಅಧಿಕಾರ ಹೊಂದಿದ ಮುತಾಲೀಕನಾಗಲಿ ಈ ತಾರೀಖು ಲಾಗಾಯಿತು ಒಂದು ತಿಂಗಳು ಒಳಗಾಗಿ ಹಾಜರಾಗಿ ವಾಪಸ್ ಪಡಿಯ ಬೇಕು, ತಪ್ಪಿದಲ್ಲಿ 1877ನೇ ಇಸವಿ 3ನೇ ನಂಬರ್ ರಿಜಿಸ್ಟ್ರೇಷನ್ ಆಕ್ಟು 85ನೇ ಸೆಕ್ಷನ್ ಮೇರಿಗೆ ನಾಶಮಾಡಲ್ಪಡುತ್ತೆ.

ನಂಬರ್.	ದಸ್ತಾವೇಜು ಬರದು ಕೊಟ್ಟವರ ಹೆಸರು ಮತ್ತು ಅಡಿಷ್ಟ.	ದಸ್ತಾವೇಜು ಬರಿಸಿ ಕೊಂಡವರ ಹೆಸರು ಮತ್ತು ಅಡಿಷ್ಟ.	ರಿಜಿಸ್ಟ್ರಿಗೆ ಹಾಜರು ಆಗಿ ಸಹಿ ಮಾಡಿದ ದಿವಸ.	ರಿಜಿಸ್ಟ್ರಿನ ಸೀಲ್ ಮುದ್ರೆ ಹಾಕಿ ಕೊಟ್ಟ ದಿವಸ.	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
31 1885—86	ಯಡತೊರೆ ತಾಲ್ಲೂಕು ಲಾಳನಹಳ್ಳಿಲಿರುವ ದೊಂಲಾಳನಹಳ್ಳಿಲಿ ಯಿರುವ ಮರೀಗೌಡನ ಸೊಸೆ ಮಲ್ಲಮ್ಮ, ಯಿವಳ ಮಗ ಈರಂಣ ಉರಫ್ ಪುಟ್ಟಸಹ	ಕೆಲ್ಲೂರು ಲಿಂಗೇಗೌಡನ ಮಗ ಚನ್ನೇಗೌಡ	1—4—85	13—4—85	(20) ರೂಪಾಯಿನ ಮನೆ ನಿವೇಕನ ಕ್ರಯಪತ್ರ.

ಟಿ. ಆನಂದರಾವ್,
ರಿಜಿಸ್ಟ್ರಾರ್.

ಗವರ್ಮೆಂಟ್ ತಯಾರೀ ಬಾಬತು ಸಿಂಕೋನಾ, ಫೆಬ್ರಿಫ್ಯೂಜ್ ಎಂಬ ಔಷಧ.

ಈ ಔಷಧವು, ಕ್ವಿನೈನ್‌ಗೆ ಬದಲಾಗಿ ಉಪಯೋಗಿಸತಕ್ಕ ಬಹಳ ಯೋಗ್ಯವಾದ ಔಷಧವಾಗಿರುತ್ತೆ. ಜನಗಳಿಗಾಗಿ ವ ದರ್ಮಾರ್ಥವಾಗಿ ಗವರ್ಮೆಂಟ್ ಆಫೀಸರ್‌ಗಳು ಕೊಂಡು ಕೊಳ್ಳಬಹುದು, ಬಂದು ಸಲಕ್ಕೆ ಇಪ್ಪತ್ತು ಪೌಂಡುಗಳು ತೆಗದುಕೊಳ್ಳುವ ಯಾವ ಮನುಷ್ಯರಾದರೂ ಕಲ್‌ಕತ್ತೆಯಲ್ಲಿ ಬೊಟಾನಿಕಲ್ ಗಾರ್ಡನ್ ಸೂಪರ್‌ಟಿಂಡೆಂಟರ ದೆಶೆಯಿಂದ ಇದರಡಿ ಕಂಡ ದರಗಳ ಪ್ರಕಾರ ನಗದು ಕೊಟ್ಟೇ ಕೊಂಡುಕೊಳ್ಳಬೇಕಾಗಿರುತ್ತೆ. ನಾಲ್ಕು ಔನ್ಸ್ ಔಷಧವುಳ್ಳ ತಗರದ ಡಬ್ಬೀ ಬಂದಕ್ಕೆ ರೂ. 4—8—0; ಎಂಟು ಔನ್ಸ್‌ವುಳ್ಳ ಡಬ್ಬಿ ರೂ. 8—8—0; ಒಂದು ಪೌಂ ಔಷಧವುಳ್ಳ ಡಬ್ಬಿಗೆ ರೂ. 16—8—0; ಬೊಟಾನಿಕಲ್ ಗಾರ್ಡನ್ ಸೂಪರ್‌ಟಿಂಡೆಂಟರು ಇದರಡಿ ಕಂಡ ದರ ಪ್ರಕಾರ ನಗದಿಗೇನೇ ಸರ್ವಜನಗಳಿಗೂ ಒದಗಿಸ ಬಹುದು; ನಾಲ್ಕು ಔನ್ಸ್‌ವುಳ್ಳ ಡಬ್ಬಿಬಂದಕ್ಕೆ ರೂ. 5—8—0, ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 10—8—0, ಒಂದು ಪೌಂವುಳ್ಳ ಡಬ್ಬಿಗೆ 20 ರೂಪಾಯಿ ಈ ಔಷಧವು, ಕಲ್‌ಕತ್ತೆಯಲ್ಲಿ ಮುಖ್ಯ ಮುಖ್ಯ ಯೂರೋಪಿಯರ್ ನೇಟಿವ್ ಮುದ್ದಿನಂಗಡಿಯವರಿಂದ ಮಾರಲ್ಪಡುತ್ತೆ. ಸದರೀ ಕಿಮ್ಮತಿನೊಂದಿಗೆ ದರ 4 ವ 8 ಔನ್ಸ್ ತಗರದ ಡಬ್ಬಿಗೆ ಎಂಟು ಆಣೆ ಟಪ್ಪಾಲ್ ಹಾಸಲೂ, ಒಂದು ಪೌಂ ಡಬ್ಬಿಗೆ ಹನ್ನೆರಡು ಆಣೆ ಹಾಸಲೂ ಕೊಡಬೇಕು.

Mysore Government Press, Bangalore.—1887.